**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 4/2019**

**ಚಾ.ಸಾ. :- 15**
**ಪ್ರಾ.ಸಾ. :- 05**

| | | |
|---|---|---|
| ಹೆಸರು | : | ರವೀಂದ್ರ.ಸಿ.ಎಂ |
| ತಂದೆಯ ಹೆಸರು | : | ಮರೀಗೌಡ |
| ವಯಸ್ಸು | : | 47 ವರ್ಷ |
| ಉದ್ಯೋಗ | : | ಪಿ.ಐ., ನಂಜನಗೂಡು |
| ವಾಸಸ್ಥಳ | : | ನಂಜನಗೂಡು. |

---

**ಪ್ರಮಾಣೀಕರಿಸಲಾದ ದಿನಾಂಕಃ- 09.02.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2017 ಅಕ್ಟೋಬರ್ ರಿಂದ ಜನವರಿ-2019 ರ ಅವಧಿಯಲ್ಲಿ ಶ್ರೀರಂಗಪಟ್ಟಣದಲ್ಲಿ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 24.01.2018 ರಂದು ನಾನು ಚಾ.ಸಾ-14 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಪಂಚರ ಸಮಕ್ಷಮ ಮೃತರ ಶವಪಂಚನಾಮೆಯನ್ನು ಜರುಗಿಸಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ಈಗಾಗಲೇ ನಿಪಿ-9 ಎಂದು ಗುರುತಿಸಲಾಗಿದೆ. ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ಫೋಟೋಗಳನ್ನು ಪಂಚನಾಮೆಯ ಸಮಯದಲ್ಲಿ ತೆಗೆಯಿಸಿರುತ್ತೇನೆ. ಮೃತರ ಮರಣೋತ್ತರ ಪರೀಕ್ಷೆಯನ್ನು ಮಾಡುವಂತೆ ಮನವಿ ಸಲ್ಲಿಸಿರುತ್ತೇನೆ.

ನಂತರ ಕೃತ್ಯ ಸ್ಥಳಕ್ಕೆ ಹೋಗಿ ಪಂಚರ ಸಮಕ್ಷಮದಲ್ಲಿ ಕೃತ್ಯ ಸ್ಥಳದ ಮಹಜರನ್ನು ತಯಾರು ಮಾಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಸಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ಕಚ್ಚಾ ನಕಾಶೆಯನ್ನು ತಯಾರು ಮಾಡಿರುತ್ತೇನೆ.

ಅಪಘಾತಕ್ಕೆ ಸಂಬಂಧಿಸಿದಂತೆ ಎರಡೂ ವಾಹನಗಳನ್ನು ಪರಿಶೀಲನೆ ಮಾಡಿ ಐ.ಎಂ.ವಿ.ವರದಿ ಸಲ್ಲಿಸುವಂತೆ ಆರ್.ಟಿ.ಓ.ರವರಿಗೆ ಮನವಿ ಸಲ್ಲಿಸಿ, ನಂತರದಲ್ಲಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐ.ಎಂ.ವಿ.ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-11 ಎಂದು ಗುರುತಿಸಲಾಗಿದೆ.

ನಂತರ ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ಈಗಾಗಲೇ ನಿಪಿ-6 ಮತ್ತು 7 ಎಂದು ಗುರುತಿಸಲಾಗಿದೆ. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ. ಸದರಿ ವಾಹನದ 1 ಫೋಟೋವನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದೆ.

ನಂತರ ಅಪಘಾತಕ್ಕೆ ಒಳಗಾದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ನಿಪಿ-12 ಮತ್ತು 13 ಎಂದು ಗುರುತಿಸಲಾಯಿತು. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ. ಸದರಿ ವಾಹನದ 1 ಫೋಟೋವನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದೆ.

ಮೃತರ ಪಿ.ಎಂ.ವರದಿಯನ್ನು ಸ್ವೀಕರಿಸಿ ಕಡತಕ್ಕೆ ಲಗತ್ತಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು, ಅದನ್ನು ಈಗಾಗಲೇ ನಿಪಿ-10 ಎಂದು ಗುರುತಿಸಲಾಗಿದೆ.

ಗಾಯಾಳುವಿನ ಗಾಯದ ಪ್ರಮಾಣ ಪತ್ರವನ್ನು ಸ್ವೀಕರಿಸಿರುತ್ತೇನೆ. ಅದನ್ನು ನಿಪಿ-14 ಎಂದು ಗುರುತಿಸಲಾಯಿತು.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ತನಿಖಾ ಸಮಯದಲ್ಲಿ ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ನಂತರ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ನ್ಯಾಯಾಲಯಕ್ಕೆ ಅಂತಿಮ ವರದಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :**

ಈ ಪ್ರಕರಣದಲ್ಲಿ ಇಬ್ಬರು ಆರೋಪಿಗಳು ಇರುವುದರಿಂದ ಯಾರ ತಪ್ಪಿನಿಂದ ಅಪಘಾತವಾಗಿದೆ ಎಂದು ಹೇಳಲಾಗುವುದಿಲ್ಲ ಎಂದರೆ ಸಾಕ್ಷಿ 1ನೇ ಆರೋಪಿ ತಪ್ಪಿನಿಂದ ಅಪಘಾತ ಆಗಿರುತ್ತದೆ ಎನ್ನುತ್ತಾರೆ. 2ನೇ ಆರೋಪಿಯ ವಾಹನಕ್ಕೆ ವಿಮೆ ಇರುವುದಿಲ್ಲ ಎನ್ನುವ ಕಾರಣಕ್ಕೆ ಆತನ ವಿರುದ್ಧ ಅಂತಿಮ ವರದಿ ಸಲ್ಲಿಸಿರುತ್ತೇನೆ. ಸ್ಥಳಕ್ಕೆ ಹೋದಾಗ ಕಾರಿನ ಚಾಲಕ ಸ್ಥಳದಲ್ಲಿರಲಿಲ್ಲ.

1ನೇ ಆರೋಪಿ ಚಾಲನೆ ಮಾಡುತ್ತಿದ್ದರು ಎಂದು ಕಾರಿನ ಮಾಲೀಕರು ನೋಟೀಸಿಗೆ ಉತ್ತರ ನೀಡಿರುತ್ತಾರೆ ಹಾಗೂ ಪ್ರತ್ಯಕ್ಷ ಸಾಕ್ಷಿದಾರರು ನೋಡಿ ಗುರುತಿಸಿರುತ್ತಾರೆ.

ನಾನು ಸ್ಥಳಕ್ಕೆ ಭೇಟಿ ಕೊಟ್ಟಿಲ್ಲ ಹಾಗೂ ಪ್ರಕರಣಕ್ಕೆ ಅನುಕೂಲವಾಗುವಂತೆ ಸ್ಥಳ ಮಹಜರ್, ಕಚ್ಚಾ ನಕಾಶೆ ತಯಾರು ಮಾಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರ ಹೇಳಿಕೆಗಳನ್ನು  ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ.

ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ.

ಮೃತರ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಸದರಿಯವರಿಗೆ ವಾಹನ ಚಾಲನೆ ಮಾಡಲು ಬರುತ್ತಿರಲಿಲ್ಲ, ಹಾಗಾಗಿ ಅವರ ಅಜಾಗರೂಕತೆ ಹಾಗೂ ನಿರ್ಲಕ್ಷ್ಯತನದಿಂದ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ಪ್ರತ್ಯಕ್ಷ ಸಾಕ್ಷಿದಾರರು ಸ್ಥಳದಲ್ಲಿರಲಿಲ್ಲ ಎಂದರೆ ಸರಿಯಲ್ಲ. ಚಾ.ಸಾ-2 ಪ್ರತ್ಯಕ್ಷ ಸಾಕ್ಷಿ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ :- ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**